ಕರ್ನಾಟಕ ಸರ್ಕಾರ
**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001**
E-Mail: prydirector.edu.sgkar@nic.in

ಸಂಖ್ಯೆ : ಸಿ7(8)ಪ್ರಾಶಿಅ/ಆರ್.ಟಿ.ಇ/ಶುಲ್ಕ ಮರುಪಾವತಿ/2017-18 ದಿನಾಂಕ: 05-02-2018

: : ಸುತ್ತೋಲೆ : : [ ಅತ್ಯಾಧ್ಯತೆ ]

ವಿಷಯ: ಶಿಕ್ಷಣ ಹಕ್ಕು ಕಾಯಿದೆಯಡಿ 2017-18ನೇ ಸಾಲಿನಲ್ಲಿ ಎರಡನೇ ಕಂತಿನ ಶುಲ್ಕಮರುಪಾವತಿಗಾಗಿ ತಂತ್ರಾಂಶದಲ್ಲಿ ಅನುಸರಿಸಬೇಕಾದ ಕ್ರಮಗಳು.

ಉಲ್ಲೇಖ:1. ಸರ್ಕಾರದ ಆದೇಶ ಸಂಖ್ಯೆ ಇಡಿ 193 ಯೋಯೋಕ 2016,ದಿನಾಂಕ: 07-07-2017. ಮತ್ತು ದಿನಾಂಕ:05-01-2018.
2. ಈ ಕಛೇರಿ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:18-07-2017.
3. ಸರ್ಕಾರದ ಆದೇಶ ಸಂಖ್ಯೆ ಇಡಿ 193 ಯೋಯೋಕ 2016,ದಿನಾಂಕ:28-09-2017.
4. ಈ ಕಛೇರಿ ಸುತ್ತೋಲೆ ಸಂಖ್ಯೆ: ಯೋ(1) ಮು.ಯೋ.ಕಾ.ಹ.ಬಿ/ 01/2017-18, ದಿನಾಂಕ: 10-10-2017.
5. ಈ ಕಛೇರಿಯ ಸಮಸಂಖ್ಯೆಯ ಸುತ್ತೋಲೆ ದಿನಾಂಕ: 16-10-2017,03-11-2017.
6. ಈ ಕಛೇರಿ ಸುತ್ತೋಲೆ ಸಂಖ್ಯೆ ಇ-ಆಡಳಿತ/01/2017-18, 03-11-2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಗಳ ಕಡೆ ತಮ್ಮ ಗಮನವನ್ನು ಸೆಳೆಯಲಾಗಿದೆ. 2012-13ನೇ ಸಾಲಿನಿಂದ 2017-18ನೇ ಸಾಲಿನವರೆಗೆ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1)(ಸಿ) ಯಡಿ ದಾಖಲಾದ ವಿದ್ಯಾರ್ಥಿಗಳಿಗೆ ಶುಲ್ಕಮರುಪಾವತಿ ಪ್ರಕ್ರಿಯೆ ಚಾಲನೆಯಲ್ಲಿದೆ. ಮೊದಲ ಕಂತಿನ ಶುಲ್ಕಮರುಪಾವತಿಯನ್ನು ಶಾಲೆಗಳು ತಂತ್ರಾಶದಲ್ಲಿ ಸಲ್ಲಿಸುವ ದಾಖಲೆಗಳನ್ನು ಪರಿಶೀಲಿಸಿ ಕ್ಷೇತ್ರಶಿಕ್ಷಣಾಧಿಕಾರಿಗಳು ಅನುಮೋದನೆ ನೀಡಿದ ನಂತರದಲ್ಲಿ, ಉಪನಿರ್ದೇಶಕರು (ಆಡಳಿತ) ಹಾಗೂ ಆಯುಕ್ತರ ಹಂತದಲ್ಲಿ ಅಂತಿಮ ಅನುಮೋದನೆಯಾದ ನಂತರ ಉಪನಿರ್ದೇಶಕರ ಹಂತದಲ್ಲಿ ಬಿಲ್ಲುಗಳನ್ನು ತಯಾರಿಸಿ ಖಜಾನೆ-2 ಮುಖಾಂತರ ಆಯಾ ಶಾಲೆಗಳ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ.

ಎರಡನೇ ಕಂತಿನ ಶುಲ್ಕಮರುಪಾವತಿಯನ್ನು ಶಿಕ್ಷಣ ಹಕ್ಕು ಕಾಯಿದೆ 12(1)(ಸಿ) ಅಡಿ ದಾಖಲಾದ ವಿದ್ಯಾರ್ಥಿಗಳ ಹಾಜರಾತಿ ಮತ್ತು ಶೈಕ್ಷಣಿಕ ಪ್ರಗತಿ (ಸಿಸಿಇ) ನಮೂದಿಸಿದ ನಂತರದಲ್ಲಿ ಶೇಕಡ 60ರ ಹಾಜರಾತಿ ಮತ್ತು ಆಯಾ ವಿದ್ಯಾರ್ಥಿಯ ಶೈಕ್ಷಣಿಕ ಪ್ರಗತಿಯ ವರದಿಯನ್ನಾಧರಿಸಿ ತಂತ್ರಾಂಶದಲ್ಲಿ ಉಪನಿರ್ದೇಶಕರು(ಆಡಳಿತ) ಇವರ ಅನುಮೋದನೆಯಾದ ನಂತರದಲ್ಲಿ ಆಯಾ ಶಾಲೆಗಳ ಖಾತೆಗೆ ಉಪನಿರ್ದೇಶಕರ ಹಂತದಲ್ಲಿ ಬಿಲ್ಲುಗಳನ್ನು ತಯಾರಿಸಿ ಖಜಾನೆ-2 ಮುಖಾಂತರ ಆಯಾ ಶಾಲೆಗಳ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತದೆ.

ಆದುದರಿಂದ ಎರಡನೇ ಕಂತಿನ ಶುಲ್ಕಮರುಪಾವತಿಗಾಗಿ ಎಸ್‌ಎಟಿಎಸ್ ನಲ್ಲಿ ಶಿಕ್ಷಣ ಹಕ್ಕು ಕಾಯಿದೆಯಡಿ ದಾಖಲಾದ ವಿದ್ಯಾರ್ಥಿಗಳ ಹಾಜರಾತಿ, ಶೈಕ್ಷಣಿಕ ಪ್ರಗತಿ (ಸಿಸಿಇ) ಮಾಹಿತಿಯನ್ನು ಮೂರು ದಿನಗಳ ಒಳಗಾಗಿ ನಮೂದಿಸಲು ಸೂಚಿಸಲಾಗಿದೆ. ಉಪನಿರ್ದೇಶಕರು(ಆಡಳಿತ) ಹಾಗೂ ಸಂಬಂಧಿಸಿದ ಕ್ಷೇತ್ರಶಿಕ್ಷಣಾಧಿಕಾರಿಗಳು ತಮ್ಮ ತಮ್ಮ ಆಡಳಿತ ವ್ಯಾಪ್ತಿಯ ಶಾಲೆಗಳಿಂದ ಅತ್ಯಾಧ್ಯತೆ ಮೇರೆಗೆ ತಂತ್ರಾಂಶದಲ್ಲಿ ಮಾಹಿತಿ ನಮೂದಿಸಲು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ನೀವೇ ಜವಾಬ್ದಾರರಾಗಿರುತ್ತೀರಿ ತಿಳಿಯುವುದು.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)
ಆಯುಕ್ತರ ಕಛೇರಿ,
ಸಾರ್ವಜನಿಕ ಶಿಕ್ಷಣ ಇಲಾಖೆ.
5/2/18

ರವರಿಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ), ಇವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು / ವಲಯಗಳ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.

ಪ್ರತಿಯನ್ನು:

1. ಅಪರ ನಿರ್ದೇಶಕರು(ಆಡಳಿತ), ಆಯುಕ್ತರ ಕಛೇರಿ ಇವರಿಗೆ ಸಲ್ಲಿಸುತ್ತಾ ತಂತ್ರಾಂಶ ಅಭಿವೃದ್ಧಿ ಬಗ್ಗೆ ಇ-ಆಡಳಿತ ವಿಭಾಗದಲ್ಲಿನ ಸಂಬಂಧಿಸಿದ ಅಧಿಕಾರಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ಕೋರಿದೆ.
2. ಕಿರಿಯ ಕಾರ್ಯಕ್ರಮಾಧಿಕಾರಿಗಳು, ಎಸ್‌ಎಟಿಎಸ್ ವಿಭಾಗ, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಎಸ್‌ಎಟಿಎಸ್ ತಂತ್ರಾಂಶವನ್ನು ಶಾಲಾ ಹಂತಕ್ಕೆ ಬಿಡುಗಡೆ ಮಾಡಿ ಹಾಜರಾತಿ ಮತ್ತು ಶೈಕ್ಷಣಿಕ ಸಿಸಿಇ ಪ್ರಗತಿ ನಮೂದಿಸಲು ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.
3. ಹಿರಿಯ ಸಹಾಯಕ ನಿರ್ದೇಶಕರು, ಇ–ಆಡಳಿತ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಎರಡನೇ ಕಂತಿನ ಶುಲ್ಕಮರುಪಾವತಿಗಾಗಿ ಎನ್‌ಐಸಿ ಹಾಗೂ ಎಸ್‌ಎಟಿಎಸ್ ತಂತ್ರಾಂಶ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.
4. ಸಹಾಯಕ ನಿರ್ದೇಶಕರು, ಇ–ಆಡಳಿತ ವಿಭಾಗ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ ಎರಡನೇ ಕಂತಿನ ಶುಲ್ಕಮರುಪಾವತಿಗಾಗಿ ಎನ್‌ಐಸಿ ಹಾಗೂ ಎಸ್‌ಎಟಿಎಸ್ ತಂತ್ರಾಂಶ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಅಗತ್ಯ ಕ್ರಮವಹಿಸಲು ಸೂಚಿಸಲಾಗಿದೆ.
5. ಕಛೇರಿ ಪ್ರತಿ.